ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕಗೋಪುರ 3ನೇ ಮಹಡಿ,
ಡಾ॥ ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560 001

E-Mail Id:icps.kar@gmail.com Phone No: 080-22867381/2/3

ಸಂಖ್ಯೆ:ಐಸಿಪಿಎಸ್/ತರಬೇತಿ/ಕೋ/3/2020-21 ದಿನಾಂಕ:8-05-2021

ಮಿಷನ್ ನಿರ್ದೇಶಕರು,
ರಾಷ್ಟ್ರೀಯ ಆರೋಗ್ಯ ಮಿಷನ್
ಆರೋಗ್ಯ ಸೌಧ
ಬೆಂಗಳೂರು-23

ಮಾನ್ಯರೇ,

ವಿಷಯ: ಕೋವಿಡ್ -19 2ನೇ ಅಲೆ ಹಿನ್ನೆಲೆಯಲ್ಲಿ ಕೋವಿಡ್ ಪಾಸಿಟಿವ್ ತಾಯಂದಿರು ಕೋವಿಡ್ ಹರಡದಂತೆ ಮಕ್ಕಳಿಗೆ ಹಾಲುಣಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವು ಮೂಡಿಸುವ ಬಗ್ಗೆ

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುವ ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ.

1) ಕೋವಿಡ್-19 2ನೇ ಅಲೆ ವ್ಯಾಪಕವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನವಜಾತ ಮಕ್ಕಳಿಗೆ ಎದೆ ಹಾಲುಣಿಸುತ್ತಿರುವ ತಾಯಂದಿರು ಸೋಂಕಿಗೆ ಒಳಗಾಗಿದ್ದರೇ ಮಕ್ಕಳಿಗೆ ಸೋಂಕು ತಗುಲದಂತೆ ವಹಿಸಬೇಕಾದ ಕ್ರಮಗಳ ಬಗ್ಗೆ ಹಾಗೂ
2) ಸಾಮಾನ್ಯವಾಗಿ ಮಕ್ಕಳಿಗೆ ಹಾಲುಣಿಸುವ ತಾಯಂದಿರು ಮಕ್ಕಳನ್ನು ಕೋವಿಡ್-19 ಸೋಂಕಿನಿಂದ ರಕ್ಷಿಸಲು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ

ಸಾರ್ವಜನಿಕರಿಗೆ ಅರಿವು ಮೂಡಿಸಬೇಕಾಗಿರುವುದರಿಂದ ತಮ್ಮ ಇಲಾಖೆ ಅಡಿಯಲ್ಲಿ ಈ ಕುರಿತಂತೆ ಅರಿವು ಮೂಡಿಸಲು ಅರಿವು ಕಾರ್ಯಕ್ರಮಗಳನ್ನು ಹಾಗೂ ತರಬೇತಿಗಳನ್ನು ಆಯೋಜಿಸಲು ಕೋರಲಾಗಿದೆ.

ತಮ್ಮ ವಿಶ್ವಾಸಿ,
08.05.2021
ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.